## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ವ್ಯಾಪ್ತಿಯಡಿ ಬರುವ ನಿಗಮಗಳಲ್ಲಿ ಗಂಗಾ ಕಲ್ಯಾಣ ಯೋಜನೆಯಡಿ ವೈಯಕ್ತಿಕ ಕೊಳವೆ ಬಾವಿ ಯೋಜನೆಯಡಿ ನಿಗಧಿಪಡಿಸಿದ ಘಟಕ ವೆಚ್ಚವನ್ನು ಹೆಚ್ಚಿಸುವ ಕುರಿತು.

**ಓದಲಾಗಿದೆ:-** 1. ವ್ಯವಸ್ಥಾಪಕ ನಿರ್ದೇಶಕರು, ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ ಇವರ ಪ್ರಸ್ತಾವನೆ ಸಂಖ್ಯೆ: ದೇಹಿನಿ/ಗಂ.ಕ/ಸಿಆರ್/2022-23, ದಿನಾಂಕ: 13.06.2023

******

**ಪ್ರಸ್ತಾವನೆ:-**

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖಾ ವ್ಯಾಪ್ತಿಯ ನಿಗಮಗಳಲ್ಲಿ ಅನುಷ್ಠಾನಗೊಳಿಸುತ್ತಿರುವ ಗಂಗಾ ಕಲ್ಯಾಣ ಯೋಜನೆಯ 2022-23ನೇ ಸಾಲಿನಿಂದ ಅನ್ವಯವಾಗುವಂತೆ ಕೊಳವೆ ಬಾವಿಗಳಿಗೆ ಪಂಪ್‌ಸೆಟ್ ಹಾಗೂ ಪೂರಕ ಸಾಮಗ್ರಿಗಳನ್ನು ಸರಬರಾಜು ಮಾಡಲು ಹಣದ ಕೊರತೆ ಇರುವುದರಿಂದ ಗಂಗಾ ಕಲ್ಯಾಣ ಯೋಜನೆಯಡಿ ವೈಯಕ್ತಿಕ ಕೊಳವೆ ಬಾವಿ ಯೋಜನೆಯಡಿ ನಿಗಧಿಪಡಿಸಿದ ಘಟಕ ವೆಚ್ಚವನ್ನು ಈ ಕೆಳಕಂಡಂತೆ ಪರಿಷ್ಕರಿಸುವಂತೆ ಕೋರಿ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

| ಕ್ರ. ಸಂ | ಜಿಲ್ಲೆಗಳು | ಕೊಳವೆ ಬಾವಿ ಕೊರೆಯಲು ಪಂಪ್‌ಸೆಟ್ ಸರಬರಾಜು ಮತ್ತು ವಿದ್ಯುತ್ ಠೇವಣಿ ಪಾವತಿಗಾಗಿ ಸಹಾಯಧನ | ವಿದ್ಯುತ್ ಸರಬರಾಜು ಕಂಪನಿಗೆ ಪಾವತಿಸುವ ವಿದ್ಯುದೀಕರಣ ವೆಚ್ಚ ಸಹಾಯಧನ | ಸಾಲದ ಮೊತ್ತ | ಒಟ್ಟು ಘಟಕ ವೆಚ್ಚ |
|---|---|---|---|---|---|
| 1 | 6 ಜಿಲ್ಲೆಗಳಿಗೆ ಮಾತ್ರ (ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ, ಕೋಲಾರ, ಚಿಕ್ಕಬಳ್ಳಾಪುರ, ತುಮಕೂರು ಮತ್ತು ರಾಮನಗರ) | 3.5 ಲಕ್ಷಗಳು | 50.000/- | ರೂ.50.000/- | ರೂ.4.50 |
| 2 | ಇತರೆ ಜಿಲ್ಲೆಗಳು | 2.50ಲಕ್ಷ | 50.000/- | 50.000/- | ರೂ.3.50 |

ಈ ಹಿನ್ನೆಲೆಯಲ್ಲಿ ಕೂಲಂಕಷವಾಗಿ ಪರಿಶೀಲಿಸಿ, ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಹಿಂವಕ 286 ಬಿಎಂಎಸ್ 2023, ಬೆಂಗಳೂರು, ದಿನಾಂಕ:.29-08-2023**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖಾ ವ್ಯಾಪ್ತಿಯಡಿ ಬರುವ ನಿಗಮಗಳಲ್ಲಿ ಅನುಷ್ಠಾನಗೊಳಿಸುತ್ತಿರುವ ಗಂಗಾ ಕಲ್ಯಾಣ ಯೋಜನೆಗೆ 2023-24ನೇ ಸಾಲಿನಿಂದ ಅನ್ವಯವಾಗುವಂತೆ ಕೊಳವೆ ಬಾವಿಗಳಿಗೆ ಪಂಪ್‌ಸೆಟ್

....2

29/8/23

ಹಾಗೂ ಪೂರಕ ಸಾಮಗ್ರಿಗಳನ್ನು ಪಾವತಿಸುತ್ತಿರುವ ಪ್ರತಿ ಕೊಳವೆಬಾವಿ ಘಟಕ ವೆಚ್ಚವನ್ನು ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ, ರಾಮನಗರ, ಕೋಲಾರ, ಚಿಕ್ಕಬಳ್ಳಾಪುರ ಮತ್ತು ತುಮಕೂರು, ಜಿಲ್ಲೆಗಳಲ್ಲಿ ರೂ.4.75 ಲಕ್ಷಗಳು (ಇದರಲ್ಲಿ ರೂ.4.00 ಲಕ್ಷ ಸಹಾಯಧನ (ರೂ.75,000/- ವಿದ್ಯುದೀಕರಣ ಸೇರಿದಂತೆ) ಹಾಗೂ ರೂ.50,000/- ಸಾಲ ಹಾಗೂ ಇತರೆ ಜಿಲ್ಲೆಗಳಿಗೆ ರೂ.3.75 ಲಕ್ಷಗಳು (ಇದರಲ್ಲಿ ರೂ.3.00 ಲಕ್ಷ ಸಹಾಯಧನ (ರೂ.75,000/- ವಿದ್ಯುದೀಕರಣ ಸೇರಿದಂತೆ) ಹಾಗೂ ರೂ.50,000/- ಸಾಲ ಹೀಗೆ ಪರಿಷ್ಕೃತ ಘಟಕ ವೆಚ್ಚವನ್ನು ಈ ಕೆಳಕಂಡ ಷರತ್ತಿಗೊಳಪಟ್ಟು ಹೆಚ್ಚಿಸಿ ಆದೇಶಿಸಿದೆ.

| ಕ್ರ. ಸಂ | ಜಿಲ್ಲೆಗಳು | ಕೊಳವೆ ಬಾವಿ ಕೊರೆಯಲು ಪಂಪ್‌ಸೆಟ್ ಸರಬರಾಜು ಮತ್ತು ವಿದ್ಯುತ್ ಠೇವಣಿ ಪಾವತಿಗಾಗಿ ಸಹಾಯಧನ | ವಿದ್ಯುತ್ ಸರಬರಾಜು ಕಂಪನಿಗೆ ಪಾವತಿಸುವ ವಿದ್ಯುದೀಕರಣ ವೆಚ್ಚ ಸಹಾಯಧನ | ಸಾಲದ ಮೊತ್ತ | ಒಟ್ಟು ಘಟಕ ವೆಚ್ಚ |
|---|---|---|---|---|---|
| 1 | 6 ಜಿಲ್ಲೆಗಳಿಗೆ ಮಾತ್ರ (ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ, ಕೋಲಾರ , ಚಿಕ್ಕಬಳ್ಳಾಪುರ, ತುಮಕೂರು ಮತ್ತು ರಾಮನಗರ) | ರೂ.3,50,000 | 75.000/- | ರೂ.50.000/- | ರೂ.4.75,000 |
| 2 | ಇತರೆ ಜಿಲ್ಲೆಗಳು | ರೂ.2,50,000 | 75,000/- | 50.000/- | ರೂ.3,75,000 |

**ಷರತ್ತು:-**

1. ಗಂಗಾ ಕಲ್ಯಾಣ ಯೋಜನೆಗೆ ಸಂಬಂಧಿಸಿದಂತೆ ಯಾವುದೇ ಹೆಚ್ಚುವರಿ ಅನುದಾನ ಕೋರತಕ್ಕದ್ದಲ್ಲ ಹಾಗೂ ಅನುದಾನಕ್ಕೆ ಸೀಮಿತವಾಗಿ ಫಲಾನುಭವಿಗಳ ಸಂಖ್ಯೆಯನ್ನು ಕಡಿಮೆ ಮಾಡಿಕೊಳ್ಳತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ:ಆಇ/653/ವೆಚ್ಚ3/2023 ದಿನಾಂಕ:22.08.2023 ರಲ್ಲಿ ನೀಡಿರುವ ಸಹಮತಿಯನ್ವಯ ಹಾಗೂ ಸರ್ಕಾರದ ಆದೇಶ ಸಂಖ್ಯೆ: ಎಫ್ ಡಿ 07 ಟಿಎಫ್ ಪಿ 2022, ದಿನಾಂಕ:31.07.2023 ರಲ್ಲಿ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಿರುವ ಆರ್ಥಿಕ ಅಧಿಕಾರದ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕದ ರಾಜ್ಯಪಾಲರ ಆದೇಶಾನುಸಾರ,
ಮತ್ತು ಅವರ ಹೆಸರಿನಲ್ಲಿ

V. Akkamahadevi 29/8/23

**(ವಿ.ಅಕ್ಕಮಹಾದೇವಿ)**
ಸರ್ಕಾರದ ಅಧೀನ ಕಾರ್ಯದರ್ಶಿ-2
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ.

**ಇವರಿಗೆ:-**

1. ಪ್ರಧಾನ ಮಹಾಲೇಖಪಾಲರು, (ಎ ಮತ್ತು ಇ), ಬೆಂಗಳೂರು.
2. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು.

3. ವ್ಯವಸ್ಥಾಪಕ ನಿರ್ದೇಶಕರು, ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ ನಿಯಮಿತ, ಬೆಂಗಳೂರು.
4. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಅಲೆಮಾರಿ/ಅರೆ ಅಲೆಮಾರಿ ಅಭಿವೃದ್ಧಿ ನಿಗಮ ನಿಯಮಿತ, ಬೆಂಗಳೂರು
5. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಮಡಿವಾಳ ಮಾಚಿದೇವ ಅಭಿವೃದ್ಧಿ ನಿಗಮ(ನಿ), ಬೆಂಗಳೂರು
6. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಸವಿತಾ ಸಮಾಜ ಅಭಿವೃದ್ಧಿ ನಿಗಮ(ನಿ), ಬೆಂಗಳೂರು
7. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಉಪ್ಪಾರ ಅಭಿವೃದ್ಧಿ ನಿಗಮ ನಿಯಮಿತ,ಬೆಂಗಳೂರು.
8. ವ್ಯಸ್ಥಾಪಕ ನಿರ್ದೇಶಕರು, ಕರ್ನಾಟಕ ವೀರಶೈವ ಲಿಂಗಾಯಿತ ಅಭಿವೃದ್ಧಿ ನಿಗಮ ನಿಯಮಿತ, ಬೆಂಗಳೂರು
9. ನಿರ್ದೇಶಕರು, ಕರ್ನಾಟಕ ವಿಶ್ವಕರ್ಮ ಸಮುದಾಯಗಳ ಅಭಿವೃದ್ಧಿ ನಿಗಮ ನಿಯಮಿತ, ಬೆಂಗಳೂರು.
10. ವ್ಯವಸ್ಥಾಪಕ ನಿರ್ದೇಶಕರು, ನಿಜಶರಣ ಅಂಬಿಗರ ಚೌಡಯ್ಯ ಅಭಿವೃದ್ಧಿ ನಿಗಮ (ನಿ) ಬೆಂಗಳೂರು.
11. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಮರಾಠ ಸಮುದಾಯಗಳ ಅಭಿವೃದ್ಧಿ ನಿಗಮ (ನಿ)ಬೆಂಗಳೂರು.
12. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಒಕ್ಕಲಿಗ ಸಮುದಾಯಗಳ ಅಭಿವೃದ್ಧಿ ನಿಗಮ(ನಿ) ಬೆಂಗಳೂರು .
13. ರಾಜ್ಯ ಖಜಾನಾಧಿಕಾರಿಗಳು, ರಾಜ್ಯ ಹುಜೂರು ಖಜಾನೆ, ಬೆಂಗಳೂರು.

<u>ಪ್ರತಿ ಮಾಹಿತಿಗಾಗಿ:</u>

1. ಸರ್ಕಾರದ ಕಾರ್ಯದರ್ಶಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಇವರ ಆಪ್ತ ಕಾರ್ಯದರ್ಶಿಗಳು, ವಿಕಾಸಸೌಧ, ಬೆಂಗಳೂರು.
2. ಸರ್ಕಾರದ ಕಾರ್ಯದರ್ಶಿ, ಇಂಧನ ಇಲಾಖೆ, ಇವರ ಆಪ್ತ ಕಾರ್ಯದರ್ಶಿಗಳು, ವಿಕಾಸಸೌಧ, ಬೆಂಗಳೂರು.
2. ಸರ್ಕಾರದ ಉಪ ಕಾರ್ಯದರ್ಶಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಇವರ ಆಪ್ತ ಸಹಾಯಕರು, ವಿಕಾಸಸೌಧ, ಬೆಂಗಳೂರು.
3. ಶಾಖಾ ರಕ್ಷಾ ಕಡತ .

**************

**ಮೆಮೋ: ಪ್ರವ್ಯ(ತಾ)/ಉಪ್ರವ್ಯ(ತಾ)/ಸಪ್ರವ್ಯ(ತಾ)-1/ವ್ಯ(ತಾ)-1/2023-24** / cys-725 **ದಿನಾಂಕ:** 02 SEP 2023

**ಮಾಹಿತಿ ಹಾಗೂ ಸೂಕ್ತ ಕ್ರಮಕ್ಕಾಗಿ**

1. **ಮುಖ್ಯ ಇಂಜಿನಿಯರ್ (ವಿ), ಕಾರ್ಯ ಮತ್ತು ಪಾಲನಾ ವಲಯ, ಚಾ.ವಿ.ಸ.ನಿ.ನಿ., ಮೈಸೂರು/ಹಾಸನ.**
2. **ಎಲ್ಲಾ ಅಧೀಕ್ಷಕ ಇಂಜಿನಿಯರ್ (ವಿ), ಚಾವಿಸನಿನಿ, ಕಾರ್ಯ ಮತ್ತು ಪಾಲನಾ ವೃತ್ತ,**
3. **ಉಪ ಪ್ರಧಾನ ವ್ಯವಸ್ಥಾಪಕರು,(ಎಂ.ಐ.ಎಸ್), ನಿಗಮ ಕಛೇರಿ, ಚಾವಿಸನಿನಿ, ಮೈಸೂರು ನಿಗಮದ ವೆಬ್ ಸೈಟ್ ನಲ್ಲಿ ಪ್ರಕಟಿಸಲು.**
4. **ಎಲ್ಲಾ ಕಾರ್ಯನಿರ್ವಾಹಕ ಇಂಜಿನಿಯರ್(ವಿ), ಚಾವಿಸನಿನಿ, ಕಾರ್ಯ ಮತ್ತು ಪಾಲನಾ ವಿಭಾಗ,**
5. **ಆಪ್ತ ಸಹಾಯಕರು ವ್ಯವಸ್ಥಾಪಕ ನಿರ್ದೇಶಕರು/ತಾಂತ್ರಿಕ ಸಹಾಯಕರು ನಿರ್ದೇಶಕರು(ತಾಂತ್ರಿಕ)ಇವರ ಗಮನಕ್ಕೆ.**

**ಮುಖ್ಯ ಕಡತ/ಕ.ಪ್ರ.**

ಪ್ರಧಾನ ವ್ಯವಸ್ಥಾಪಕರು (ತಾಂತ್ರಿಕ),
**ಚಾವಿಸನಿನಿ, ಮೈಸೂರು.**